# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯು:-ಬೆಳಗಾವಿ ಜಿಲ್ಲೆ ಗೋಕಾಕ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1) ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-1) ಸರ್ಕಾರದ ಆದೇಶ ಸಂಖ್ಯೆ:ನಅಇ 135 ಬೆಮುಪ್ರಾ 2007 ದಿನಾಂಕ:03.07.2007.

2) ಗೋಕಾಕ್ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂ.ನಯೋಪ್ರಾಗೋ:ಮಾಪ್ಲಾ(ಪ-1):101:2007-08 ದಿನಾಂಕ:17.03.2008.

3) ದಿನಾಂಕ 28.04.2008 ರಂದು ಕಡತ ಸಂಖ್ಯೆ: ನಯೋ(7):ಉನಿ1 ಗೋಕಾಕ್ ಮಯೋ(ಪ-1):ಅಂತಿಮ:2008ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ.

ಗೋಕಾಕ ನಗರ ಯೋಜನಾ ಪ್ರಾಧಿಕಾರ ಕಛೇರಿ
ಆವಕ ಸಂಖ್ಯೆ 34
ದಿನಾಂಕ 9-6-08
ಗೋ ಕಾ ಕ

*****

**ಪ್ರಸ್ತಾವನೆ:**

ಮೇಲೆ (1)ರ ಸರ್ಕಾರಿ ಆದೇಶದಲ್ಲಿ ಬೆಳಗಾವಿ ಜಿಲ್ಲೆ ಗೋಕಾಕ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1) ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಗೋಕಾಕ್ ನಗರ ಯೋಜನಾ ಪ್ರಾಧಿಕಾರವು ಗೋಕಾಕ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1)ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1)ರ ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆ (ಪರಿಷ್ಕೃತ-1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಗೋಕಾಕ್ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 1.15 ಲಕ್ಷಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪರಿಷ್ಕೃತ-1) ಯನ್ನು ತಯಾರಿಸಲಾಗಿದೆ. ಗೋಕಾಕ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 5676.74 ಹೆಕ್ಟರ್ ಪ್ರದೇಶದಲ್ಲಿ 1208.90 ಹೆಕ್ಟರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗೆ ಪ್ರಸ್ತಾಪಿಸಿರುವ 1208.90 ಹೆಕ್ಟರ್ ಪ್ರದೇಶದಲ್ಲಿ ವಸತಿಗಾಗಿ 578.45 ಹೆಕ್ಟರ್ (ಶೇ.48.78) ವಾಣಿಜ್ಯಕ್ಕಾಗಿ 68.78 ಹೆಕ್ಟರ್ (ಶೇ.5.80), ಕೈಗಾರಿಕೆಗಾಗಿ 86.99 ಹೆಕ್ಟರ್

(ಶೇ.7.34), ಸಾರ್ವಜನಿಕ:ಅರೆಸಾರ್ವಜನಿಕ ಉಪಯೋಗಕ್ಕೆ 71.58 ಹೆಕ್ಟರ್(ಶೇ.6.03), ಉದ್ಯಾನವನ:ಬಯಲು ಜಾಗೆಗಳಿಗೆ 128.16 ಹೆಕ್ಟರ್ (ಶೇ.10.81), ನಾಗರೀಕ ಸೌಲಭ್ಯಕ್ಕಾಗಿ 4.73 ಹೆಕ್ಟರ್ (ಶೇ.0.40) ಹಾಗೂ ಸಾರಿಗೆ:ಸಂಪರ್ಕ ವಲಯಕ್ಕೆ 247.21 ಹೆಕ್ಟರ್ (ಶೇ.20.84) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆ (ಪರಿಷ್ಕೃತ-1) ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರ ಪ್ರಕಾರ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಉಲ್ಲೇಖ(3)ರ ನಗರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶಿಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 17 ಗುಅಪ್ರಾ 2008**

**ಬೆಂಗಳೂರು ದಿನಾಂಕ:27.05.2008**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲೆ ಗೋಕಾಕ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(3)ರ ಪ್ರಕಾರ ಅಂತಿಮ ಅನುಮೋದನೆ ನೀಡಲಾಗಿದೆ. ಮಹಾಯೋಜನೆ (ಪರಿಷ್ಕೃತ-1) ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಜಿ. ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2) ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಗೋಕಾಕ್, ಬೆಳಗಾವಿ ಜಿಲ್ಲೆ.
3) ನಗರ ಯೋಜನಾ ಸಹಾಯಕ ನಿರ್ದೇಶಕರು, ನಿಪ್ಪಾಣಿ.
4) ಕರ್ನಾಟಕ ರಾಜ್ಯ ಪತ್ರ.
5) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.